(167)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:** ವಿಜಯಪೂರ ನಗರದಲ್ಲಿ ಖಾಸಗಿ ಸಹಭಾಗಿತ್ವ (Public Private Partnership) ಮಾದರಿಯ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ಸರ್ಕಾರದ ನಿರ್ಧಾರವನ್ನು ಕೈ ಬಿಟ್ಟು ಸಂಪೂರ್ಣ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ಕುರಿತು.

**ಉತ್ತರ: -**

ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ.

ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ. ಅದರಂತೆ, ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಹೊಂದಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದು.

ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ ಪೂರ್ವಭಾವಿ ಸಭೆಯನ್ನು ನಡೆಸಲಾಗಿದ್ದು, iDECK ಸಂಸ್ಥೆಯನ್ನು Transaction Advisor ಆಗಿ ನೇಮಿಸಲಾಗಿದೆ.

ವಿಜಯಪುರ ಜಿಲ್ಲೆಯಲ್ಲಿ ಸಾರ್ವಜನಿಕ ಖಾಸಗಿ ಸಹಬಾಗಿತ್ವದಡಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವುದನ್ನು ಕೈಬಿಟ್ಟು ಸಂಪೂರ್ಣವಾಗಿ ರಾಜ್ಯ ಸರ್ಕಾರದಿಂದ ಅನುದಾನ ಭರಿಸಿ ಸ್ಥಾಪಿಸುವಂತೆ ಕೋರಿ ಹಲವು ಗಣ್ಯರಿಂದ ಹಾಗೂ ಸಾರ್ವಜನಿಕರಿಂದ ಬೇಡಿಕೆಗಳು ಸ್ವೀಕೃತವಾಗಿರುತ್ತವೆ.

ಪ್ರಸ್ತುತ, 2026-27 ನೇ ಸಾಲಿನ ಆಯವ್ಯಯದಲ್ಲಿ ಕಂಡಿಕೆ-161ರಲ್ಲಿ "ವಿಜಯಪುರ ಮತ್ತು ಕೋಲಾರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ವಿಸ್ತೃತ ಯೋಜನಾ ವರದಿ ತಯಾರಿಸಲಾಗುವುದು", ಎಂದು ಘೋಷಿಸಲಾಗಿದೆ. ಸದರಿ ಘೋಷಣೆಗೆ ಸಂಬಂಧಿಸಿದಂತೆ, ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸುವಂತೆ ಮುಖ್ಯ ಇಂಜಿನಿಯರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ಘಟಕ, ಬೆಂಗಳೂರು ಮತ್ತು ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರನ್ನು ಕೋರಲಾಗಿದೆ. ಈ ಬಗ್ಗೆ ವರದಿ ಸ್ವೀಕೃತವಾದ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ: ಎಂಇಡಿ 169 ಎಂಎಂಸಿ 2026

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.